5.	ವೈ.ಕೆ.ನಾಗರಾಜು	08.12.1999
6.	ಬಸವರಾಜು	21.01.2000
7.	ಹೆಚ್. ಎಸ್. ಸಿದ್ಧಯ್ಯ	12.01.2000
8.	ಎನ್. ನಾಗವೇಣಿ	06.05.2005

5743, (6435) ಶ್ರೀ ಶಂಕರಲಿಂಗೇಗೌಡ ಹೆಚ್. ಎಸ್. (ಚಾಮರಾಜ ನಗರ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಕಳೆದ ಮೂರು ವರ್ಷಗಳಲ್ಲಿ ಯಾವ ಯಾವ ಸಾಂಸ್ಕೃತಿಕ ಸಂಘಟನೆಗಳಿಗೆ ಎಷ್ಟೆಷ್ಟು ಮೊತ್ತವನ್ನು ಧನ ಸಹಾಯವಾಗಿ ನೀಡಲಾಗಿದೆ;

ಆ) ಇದಕ್ಕೆ ಬೇಕಾದ ಅರ್ಹತೆಗಳೇನು; ಆಯ್ಕೆಯ ಮಾನ ದಂಡಗಳೇನು; (ವಿವರ ನೀಡುವುದು);

ಇ) ಈ ಮೊತ್ತವನ್ನು ಹೆಚ್ಚಿಸಬೇಕೆಂಬ ಮನವಿಯ ಬಗ್ಗೆ ಸರ್ಕಾರದ ನಿಲುವೇನು;

ಶ್ರೀ ಧರ್ಮಸಿಂಗ್, ಮಾನ್ಯ ಮುಖ್ಯ ಮಂತ್ರಿಗಳು

ಅ) ಕಳೆದ ಮೂರು ವರ್ಷಗಳಲ್ಲಿ ನಿರ್ದೇಶನಾಲಯ ಹಾಗೂ ಜಿಲ್ಲಾ ಸಹಾಯಕ ನಿರ್ದೇಶಕರ ಕಛೇರಿಯಿಂದ ಸುಮಾರು 2100ಕ್ಕೂ ಹೆಚ್ಚು ಸಾಂಸ್ಕೃತಿಕ ಸಂಘಟನೆಗಳಿಗೆ ಧನ ಸಹಾಯ ನೀಡಲಾಗಿದೆ. ಈ ಮಾಹಿತಿಯನ್ನು ಜಿಲ್ಲಾದ್ಯಂತ ಸಂಗ್ರಹಿಸಬೇಕಾದ್ದರಿಂದ ಈ ಕ್ಷುಪ್ತ ಅವಧಿಯಲ್ಲಿ ವಿವರಗಳನ್ನು ಶೀಘ್ರವಾಗಿ ಸಂಗ್ರಹಿಸಿ ಮಾನ್ಯ ಸದಸ್ಯರಿಗೆ ಒದಗಿಸಲಾಗುವುದು.

ಆ) ಕನ್ನಡ ಪರ ಸಂಘ ಸಂಸ್ಥೆಗಳು ನೋಂದಣಿಯಾಗಿ ಕನಿಷ್ಟ 3 ವರ್ಷಗಳಾಗಿರಬೇಕು. ಹಾಗೂ ನಿರಂತರವಾಗಿ ಕಾರ್ಯ ಕ್ರಮಗಳನ್ನು ನಡೆಸಿಕೊಂಡು ಬರುತ್ತಿರಬೇಕು. ಶುದ್ಧ ಸಾಂಸ್ಕೃತಿಕ ವಾತಾವರಣವನ್ನುಂಟು ಮಾಡುವಂಥ ಸಾಂಸ್ಕೃತಿಕ ಚಟುವಟಿಕೆಯಲ್ಲಿ ತೊಡಗಿರಬೇಕು.

ಇ) ಮೊತ್ತವನ್ನು ಸಂಸ್ಥೆಯು ಹಮ್ಮಿಕೊಳ್ಳುವ ಕಾರ್ಯಕ್ರಮಗಳ ಗುಣಾತ್ಮಕ ಮೌಲ್ಯ ಹಾಗೂ ಅಂದಾಜು ವೆಚ್ಚದ ಆಧಾರದ ಮೇಲೆ ನೀಡಲಾಗುತ್ತಿದೆ. ಆದ್ದರಿಂದ ಈ ಮೊತ್ತವನ್ನು ಹೆಚ್ಚಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

5746, (6592) ಶ್ರೀ ಸಿಂಧೂರ ಜಿ. ರಾಜಶೇಖರ (ಶಿಗ್ಗಾಂವ್) :– ಮಾನ್ಯ ಜಲ ಸಂಪನ್ಮೂಲ ಹಾಗೂ ಸಾರಿಗೆ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಸನ್ 1968–69 ರಲ್ಲಿ ಶಿವಮೊಗ್ಗ ಜಿಲ್ಲೆಯ ಮೇಗರವಳ್ಳಿ ಹತ್ತಿರ ಮಾಲತಿ ನದಿಗೆ ಅಣೆಕಟ್ಟು ನಿರ್ಮಿಸಿ ಹಾವೇರಿ, ಗದಗ, ಕೊಪ್ಪಳ ಜಿಲ್ಲೆಗಳಲ್ಲಿ ಬರುವ ಭೂಮಿಗಳಿಗೆ ನೀರಾವರಿ ಕಲ್ಪಿಸಿಕೊಡುವ ಮೂಲ ಯೋಜನೆ ಸರ್ಕಾರದ ಉದ್ದೇಶವೇನಾದರೂ ಇದೆಯೇ;

ಆ) ಹಾಗಿದ್ದಲ್ಲಿ ಮಾಲತಿ ಅಣೆಕಟ್ಟು ನಿರ್ಮಾಣ ಮಾಡಿ, ಈಗಾಗಲೇ ನಿರ್ಮಾಣ ಹಂತದಲ್ಲಿರುವ ತುಂಗಾ ಮೇಲ್ದಂಡೆ ಯೋಜನೆಯ ಕಾಲುವೆಗೆ ಜೋಡಿಸಿದರೆ ಸುಮಾರು 2.34 ಲಕ್ಷ ಎಕರೆ ಭೂಮಿ ನೀರಾವರಿ ಸೌಲಭ್ಯ ಪಡೆಯಲು ಅನುಕೂಲವಾಗುವ ಕಾರಣ ಸರ್ಕಾರ ಯೋಗ್ಯ ಕ್ರಮ ಕೈಗೊಳ್ಳುವುದೇ;

ಇ) ತುಂಗಾ ಮೇಲ್ದಂಡೆ ಯೋಜನೆಯಡಿಯಲ್ಲಿ ಮುಖ್ಯ ಕಾಲುವೆ 339.5 ಕಿ.ಮೀ.ವರೆಗೆ ಅಂದಾಜು ವೆಚ್ಚ ಪತ್ರಿಕೆ ತಯಾರಿಸಿ ಈಗಾಗಲೇ ಕಾಮಗಾರಿ ಭರದಿಂದ ಸಾಗಿದ್ದು, ಹಾನಗಲ್ ತಾಲ್ಲೂಕಿನಲ್ಲಿ ವಿತರಣಾ ಕಾಲುವೆ ನಿರ್ಮಾಣ ಮಾಡದೇ, ಮುಖ್ಯ ಕಾಲುವೆ ನಿರ್ಮಾಣ ಮಾಡುವುದು